<u>ಸಾಕ್ಷಿಗೆ ದಿನಾಂಕಃ **04.12.2025** ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ</u>

<u>ಮುಂದುವರಿದ ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.VK ರವರಿಂದಃ</u>

1) **ಮದುವೆಯ ಆಹ್ವಾನ ಪತ್ರವನ್ನು** ಹಾಜರುಪಡಿಸಿದ್ದು ಅದನ್ನು ನಿ.ಪಿ.**6** ಎಂದು ಗುರುತಿಸಿದೆ.

2) **2** ನೇ ಅರ್ಜಿದಾರರ ಮೂಲ ಆಧಾರ್ ದಾಖಲೆ ಮತ್ತು ಇದೇ ದಾಖಲೆಯ ಫೋಟೋ ಪ್ರತಿಯನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಯನ್ನು ಮತ್ತು ಫೋಟೋ ಪ್ರತಿಯನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಯನ್ನು ಆಧಾರವಾಗಿ ಇಟ್ಟು ಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಯನ್ನು ಸಿದ್ದಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಯನ್ನು ನಿ.ಪಿ.**7** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಯನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

3) ಅಂತಿಮ ವರದಿಯನ್ನು ನಿ.ಪಿ.**8** ಎಂದು ಗುರುತಿಸಿದೆ.

4) ಪೊಲೀಸರಿಗೆ ನೀಡಿರುವ ದೂರನ್ನು ನಿ.ಪಿ.**9** ಎಂದು ಗುರುತಿಸಿದೆ.

5) ಅಪರಾಧ ವಿವರ ನಮೂನೆಯನ್ನು ನಿ.ಪಿ.**10** ಎಂದು, ಶವ ತನಿಖಾ ವರದಿಯನ್ನು ನಿ.ಪಿ.**11** ಎಂದು, ಶವ ಪರೀಕ್ಷಾ ವರದಿಯನ್ನು ನಿ.ಪಿ.**12** ಎಂದು ಮತ್ತು ಐಎಂವಿ ವರದಿಯನ್ನು ನಿ.ಪಿ.**13** ಎಂದು ಗುರುತಿಸಿದೆ.

6) ಐ.ಎಂ.ವಿ ಕಾಯ್ದೆ ಕಲಂ **133** ರ ಅಡಿಯಲ್ಲಿ ನೀಡಿರುವಂತಹ ನೋಟಿಸ್

ಅನ್ನು ನಿ.ಪಿ.**14** ಎಂದು ಮತ್ತು ನಿ.ಪಿ.**14(ಎ)** ಎಂದು ಗುರುತಿಸಿದೆ.

7) ಅಪಘಾತದಲ್ಲಿ ಮರಣ ಹೊಂದಿದೆ ಮಧು ಕಿರಣ್ ರವರ ಚಾಲನಾ ಪರವಾನಗಿ ಮತ್ತು **KA-04-JK-4644** ವಾಹನದ **Certificate of Registration** ಅನ್ನು ಮತ್ತು ಇದೇ ದಾಖಲೆಗಳ ಫೋಟೋ ಪ್ರತಿಗಳನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಗಳನ್ನು ಮತ್ತು ಫೋಟೋ ಪ್ರತಿಗಳನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಗಳನ್ನು ಆಧಾರವಾಗಿ ಇಟ್ಟು ಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಗಳನ್ನು ಸಿದ್ದಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಗಳನ್ನು ನಿ.ಪಿ.**15** ಮತ್ತು **16** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಗಳನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

**ಈ ಹಂತದಲ್ಲಿ ಮತ್ತೆ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಸಾಕ್ಷಿದಾರರು ಸಮಯ ಕೇಳಿದ್ದಾರೆ, ಸಮಯ ನೀಡಿದೆ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.